RNU AIR DHARWAD

NOVEMBER 1,2024
ALL INDIA RADIO- DHARWAD
PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವರು: ವಿವೇಕಾದಿತ್ಯ ಕನಿಯಾಲ

<><><>

ಇಂದು ನಾಡಿನೆಲ್ಲೆಡೆ 69ನೇ ಕನ್ನಡ ರಾಜ್ಯೋತ್ಸವದ, ಸಂಭ್ರಮಾಚರಣೆ ಮನೆ ಮಾಡಿದೆ. ‘ಹೆಸರಾಯಿತು ಕರ್ನಾಟಕ; ಉಸಿರಾಗಲಿ ಕನ್ನಡ’ ಧ್ಯೇಯದೊಂದಿಗೆ, ಕರ್ನಾಟಕ ನಾಮಕರಣ ಸಂಭ್ರಮದ 50ನೇ ವರ್ಷಾಚರಣೆ, ಈ ಬಾರಿಯ ರಾಜ್ಯೋತ್ಸವ ಸಂಭ್ರಮವನ್ನು ಇಮ್ಮಡಿ ಗೊಳಿಸಿದೆ.

<><><>

ರಾಜ್ಯದ 31 ಜಿಲ್ಲೆಗಳಲ್ಲಿ, ಕನ್ನಡದ ಕಂಪನ್ನು ಪಸರಿಸುತ್ತ ಸಂಚರಿಸಿದ, ಕನ್ನಡ ಜ್ಯೋತಿ ಯಾತ್ರೆ ರಥ, ಬೆಂಗಳೂರಿನಲ್ಲಿ ಆಯೋಜಿತ ಪ್ರಧಾನ ಕಾರ್ಯಕ್ರಮದ ಸ್ಥಳ ತಲುಪಿದೆ.

<><><>

ರಾಜ್ಯಪಾಲ ಥಾವರಚಂದ ಗೆಹ್ಲೋಟ್, ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ, ವಿಧಾನಸಭೆ ವಿಪಕ್ಷ ನಾಯಕ ಆರ್.ಅಶೋಕ, ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಸೇರಿದಂತೆ, ಸಾಂಸ್ಕೃತಿಕ, ಸಾಹಿತ್ಯ ಹಾಗೂ ಸಂಗೀತ ಕ್ಷೇತ್ರದ ದಿಗ್ಗಜರು, ನಾಡಿನ ಜನತೆಗೆ ರಾಜ್ಯೋತ್ಸವದ ಹಾರ್ದಿಕ ಶುಭಾಶಯಗಳನ್ನು ಕೋರಿದ್ದಾರೆ.

<><><>

ರಾಜ್ಯೋತ್ಸವ ಸಂದೇಶ ನೀಡಿರುವ ರಾಜ್ಯಪಾಲ ಥಾವರಚಂದ ಗೆಹ್ಲೋಟ್ ಅವರು, ‘ಕರ್ನಾಟಕದ ಸಮಸ್ತ ಜನತೆಗೆ, ಕನ್ನಡ ರಾಜ್ಯೋತ್ಸವದ ಶುಭಾಶಯಗಳು. ಈ ದಿನದಂದು ಕರ್ನಾಟಕದ ಏಕೀಕರಣ ಮತ್ತು ನಮ್ಮ ಜನರ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಸ್ಮರಿಸಿ, ಆಚರಿಸೋಣ. ಕರ್ನಾಟಕ ರಾಜ್ಯದ ಏಕತೆ ಮತ್ತು ಏಳಿಗೆಗಾಗಿ ಹೋರಾಡಿದ ದಾರ್ಶನಿಕರನ್ನು ನೆನೆಯೋಣ’ ಎಂದಿದ್ದಾರೆ. ಮುಖ್ಯಮಂತ್ರಿ ಸಿದ್ದರಾಮಯ್ಯ ತಮ್ಮ ಶುಭಾಶಯ ಸಂದೇಶದಲ್ಲಿ, “ಏಕತೆ, ಸಹೋದರತ್ವ ಮತ್ತು ಸಾಮಾಜಿಕ ಸಾಮರಸ್ಯವನ್ನು ಉತ್ತೇಜಿಸುವ ಮೂಲಕ, ನಾಡು–ನುಡಿ ಕಟ್ಟಿದ ಹಿರಿಯ ಪರಂಪರೆಯನ್ನು ಗೌರವಿಸೋಣ ಹಾಗೂ ರಾಜ್ಯದ ಅಭಿವೃದ್ಧಿಗೆ ಶ್ರಮಿಸೋಣ‘ ಎಂದು ಕರೆ ನೀಡಿದ್ದಾರೆ.

<><><>

‘ಕರ್ನಾಟಕ’ ರಾಜ್ಯ ನಾಮಕರಣ ಸಂಭ್ರಮ 50, ಸುವರ್ಣ ಮಹೋತ್ಸವ ಆಚರಣೆ ಹಿನ್ನೆಲೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಐವತ್ತು ಮಹಿಳಾ ಸಾಧಕಿಯರು ಹಾಗೂ 50 ಪುರು ’ ಸಾಧಕರಿಗೆ, ಸುವರ್ಣ ಮಹೋತ್ಸವ ಪ್ರಶಸ್ತಿ ಹಾಗೂ 69 ಜನ ವಿವಿಧ ಕ್ಷೇತ್ರಗಳ ಸಾಧಕರಿಗೆ, ರಾಜ್ಯೋತ್ಸವ ಪ್ರಶಸ್ತಿಗಳನ್ನು ಇಂದು ಪ್ರದಾನ ಮಾಡಿ, ಗೌರವಿಸಲಿದೆ.

ಸಂಜೆ 4.30ಕ್ಕೆ ಬೆಂಗಳೂರಿನ ವಿಧಾನಸೌಧದ ಎದುರು ಆಯೋಜಿತ, ಭವ್ಯ ಹಾಗೂ ವರ್ಣರಂಜಿತ ಸಮಾರಂಭದಲ್ಲಿ, ಮುಖ್ಯಮಂತ್ರಿ, ಉಪ ಮುಖ್ಯಮಂತ್ರಿ ಸೇರಿದಂತೆ, ಗಣ್ಯರು, ಸಾಧಕರಿಗೆ ಒಟ್ಟು 169 ಪ್ರಶಸ್ತಿ, ನಗದು ಪುರಸ್ಕಾರ ಹಾಗೂ ಸ್ಮರಣಿಕೆ ನೀಡಿ, ಗೌರವಿಸಲಿದ್ದಾರೆ. ಸುವರ್ಣ ಮಹೋತ್ಸವ ಪ್ರಶಸ್ತಿಯೊಂದಿಗೆ, ಒಂದು ಲಕ್ಷ ರೂಪಾಯಿ ನಗದು ಪುರಸ್ಕಾರವನ್ನು, ಕನ್ನಡ ಮತ್ತು ಸಂಸ್ಕೃತಿ ಖಾತೆ ಸಚಿವ ಶಿವರಾಜ ತಂಗಡಗಿ ಪ್ರಕಟಿಸಿದ್ದಾರೆ.

<><><>

ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಲಾಡ ಅವರು, ಆಲೂರು ವೆಂಕಟರಾವ ಸಾಂಸ್ಕೃತಿಕ ಭವನದಲ್ಲಿ, 69ನೇ ಕರ್ನಾಟಕ ರಾಜ್ಯೋತ್ಸವದ ಸಂಭ್ರಮಾಚರಣೆಯಲ್ಲಿ ಪಾಲ್ಗೊಂಡು, ಹಲ್ಮಿಡಿ ಶಾಸನದ ಪ್ರತಿಕೃತಿ ಬಿಡುಗಡೆ ಮಾಡಿದರು. ವಿವಿಧ ಜಾನಪದ ತಂಡಗಳ ಜಾಥಾಕ್ಕೆ ಚಾಲನೆ ನೀಡಿದರು. ಹಿರಿಯ ವಿದ್ವಾಂಸ ಡಾಕ್ಟರ್ ವೀರಣ್ಣ ರಾಜೂರ ಪಾಲ್ಗೊಂಡು, ಹಲ್ಮಿಡಿ ಶಾಸನದ ಮಹತ್ವ ವಿವರಿಸಿದರು.

<><><>

ರಾಯಚೂರು ನಗರದ ಕರ್ನಾಟಕ ಸಂಘದ ಪರಿಸರದಲ್ಲಿ ಆಯೋಜಿತ, ರಾಜೋತ್ಸವ ಕಾರ್ಯಕ್ರಮವನ್ನು ವೈದ್ಯಕೀಯ ಶಿಕ್ಷಣ ಖಾತೆ ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾಕ್ಟರ್ ಶರಣ ಪ್ರಕಾಶ ಪಾಟೀಲ ನಾಡದೇವತೆ ಭುವನೇಶ್ವರಿಗೆ ಪೂಜೆ ಸಲ್ಲಿಸಿ, ರಾಷ್ಟ್ರ ಧ್ವಜಾರೋಹಣ ಮಾಡುವ ಮೂಲಕ ಉದ್ಘಾಟಿಸಿದರು.

<><><>

ಕೊಪ್ಪಳ ಜಿಲ್ಲಾ ಕ್ರೀಡಾಂಗಣದಲ್ಲಿ ಜರುಗಿದ ರಾಜ್ಯೋತ್ಸವ ಕಾರ್ಯಕ್ರಮವನ್ನು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ಉದ್ಘಾಟಿಸಿದರು. ಈ ಸಂದರ್ಭ ಮಾತನಾಡಿದ ಅವರು ಕನ್ನಡ ಭಾಷೆಯಲ್ಲಿ ತಂತ್ರಜ್ಞಾನದ ಅಭಿವೃದ್ಧಿಗೆ ರಾಜ್ಯ ಸರಕಾರ ಹೆಚ್ಚಿನ ಒತ್ತು ನೀಡಿದೆ ಎಂದರು.

<><><>

ಬಳ್ಳಾರಿ ನಗರಸಭೆ, ಪ್ರೌಢಶಾಲಾ ಮೈದಾನದಲ್ಲಿ 69 ನೇ ಕರ್ನಾಟಕ ರಾಜ್ಯೋತ್ಸವದಲ್ಲಿ ಪಾಲ್ಗೊಂಡ ಕಂದಾಯ ಖಾತೆ ಸಚಿವ ಕೃಷ್ಣ ಬೈರೇಗೌಡ ಅವರು ಭುವನೇಶ್ವರಿ ಪುತ್ಥಳಿಗೆ ಮಾಲಾರ್ಪಣೆ ಮಾಡಿ, ರಾಷ್ಟ್ರ ಧ್ವಜಾರೋಹಣ ನೆರವೇರಿಸಿದರು. ಹಂಪಿಯ ಭುವನೇಶ್ವರಿ ದೇವಿ ಸನ್ನಿಧಿಯಿಂದ ತರಲಾದ ಜ್ಯೋತಿಯನ್ನು ಸ್ವೀಕಾರ ಮಾಡಿದರು.

<><><>

ಗದಗ ನಗರದ ಕೆ.ಎಚ್ ಪಾಟೀಲ ಕ್ರೀಡಾಂಗಣದಲ್ಲಿ ಜರುಗಿದ ರಾಜ್ಯೋತ್ಸವ ಸಮಾರಂಭದಲ್ಲಿ ಭಾಗವಹಿಸಿದ ಕಾನೂನು, ಸಂಸದೀಯ ವ್ಯವಹಾರಗಳು, ಪ್ರವಾಸೋದ್ಯಮ ಇಲಾಖೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ ಪಾಟೀಲ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಗೌರವ ವಂದನೆ ಸ್ವೀಕರಿಸಿದರು.

<><><>

ವಿಜಯಪುರದಲ್ಲಿ ಸಂಭ್ರಮದ ರಾಜ್ಯೋತ್ಸವ ಕಾರ್ಯಕ್ರಮ ಜರುಗಿತು. ಬೃಹತ ಮತ್ತು ಮಧ್ಯಮ ಕೈಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾಕ್ಟರ ಎಂ.ಬಿ ಪಾಟೀಲ ಅವರು ಧ್ವಜಾರೋಹಣ ನೆರವೇರಿಸಿ, ರಾಜ್ಯೋತ್ಸವ ಸಂದೇಶ ನೀಡಿದರು.

<><><>

ರಾಮನಗರ ಜಿಲ್ಲಾಡಳಿತದ ವತಿಯಿಂದ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಆಯೋಜಿಸಲಾಗಿದ್ದ ಕನ್ನಡ ರಾಜ್ಯೋತ್ಸವ ಸಮಾರಂಭದಲ್ಲಿ ಸಾರಿಗೆ, ಮುಜರಾಯಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ರಾಮಲಿಂಗಾರೆಡ್ಡಿ, ರಾಷ್ಟ್ರ ಧ್ವಜಾರೋಹಣ ನೆರವೇರಿಸಿ, ಗೌರವ ವಂದನೆ ಸ್ವೀಕರಿಸಿದರು.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ.

<><><>